## ಕರ್ನಾಟಕ ಸರ್ಕಾರ ನಡವಳಿಗಳು

**ವಿಷಯ:** ಖಜಾನೆಗಳಲ್ಲಿ ವರ್ಷಾಂತ್ಯದ ಬಿಲ್ಲುಗಳನ್ನು ಮಾರ್ಚ್ 31ರಂದೇ ತೀರ್ಣಗೊಳಿಸಿ ಲೆಕ್ಕವನ್ನು ಮುಕ್ತಾಯಗೊಳಿಸುವ ಬಗ್ಗೆ.

**ಓದಲಾಗಿದೆ:** ಸರ್ಕಾರಿ ಆದೇಶ ಸಂಖ್ಯೆ: ಆಇ 01 ಬಿಪಿಇ 2021, ದಿನಾಂಕ:27-01-2021.

* * * * *

**ಪ್ರಸ್ತಾವನೆ:-**

2020-21ನೇ ಸಾಲಿನ ವರ್ಷಾಂತ್ಯದ ಬಿಲ್ಲುಗಳನ್ನು ಖಜಾನೆಗಳಲ್ಲಿ ಸ್ವೀಕರಿಸಿ ತೀರ್ಣಗೊಳಿಸಿ ದಿ:31-03-2021 ರಂದೇ 2020-21ನೇ ಸಾಲಿನ ಲೆಕ್ಕಗಳನ್ನು ಮುಕ್ತಾಯಗೊಳಿಸಲು ಉಲ್ಲೇಖ (1) ರ ಸರ್ಕಾರಿ ಆದೇಶಗಳಲ್ಲಿ ಕಾಲಮಿತಿ ಸೂಚಿಸಿ ವೇಳಾಪಟ್ಟಿಯನ್ನು ನಿಗಧಿಪಡಿಸಲಾಗಿತ್ತು.

ವೇತನ / ವೇತನ ಬಾಕಿ ಬಿಲ್ಲುಗಳು / ಹಬ್ಬದ ಮುಂಗಡ ಬಿಲ್ಲು / ಅನುದಾನಿತ ವೇತನ ಬಿಲ್ಲುಗಳು/ ಇತರೆ ಅನುದಾನಿತ ಬಿಲ್ಲುಗಳು. ಕಛೇರಿ ವೆಚ್ಚಗಳಿಗೆ ಸಂಬಂಧಿಸಿದಂತೆ ಸಾದಿಲ್ವಾರು ಬಿಲ್ಲುಗಳು / ಪ್ರಯಾಣ ಭತ್ಯೆ ಮತ್ತು ವಿದ್ಯುಚ್ಛಕ್ತಿ, ದೂರವಾಣಿ ಹಾಗೂ ಕಟ್ಟಡ ಬಾಡಿಗೆಗೆ ಸಂಬಂಧಿಸಿದ ಬಿಲ್ಲುಗಳಿಗೆ ಸಂಬಂಧಿಸಿದಂತೆ ದಿನಾಂಕ:31-01-2021 ರೊಳಗೆ ಬಿಡುಗಡೆ ಆದೇಶಗಳನ್ನು ಹೊರಡಿಸಿ **upload** ಆಗಿರುವ ವೆಚ್ಚಗಳಿಗೆ ಸಂಬಂಧಿಸಿದ ಬಿಲ್ಲುಗಳನ್ನು ಸಲ್ಲಿಸುವ ದಿನಾಂಕವನ್ನು ವಿಸ್ತರಿಸುವಂತೆ ವಿವಿಧ ಇಲಾಖೆಗಳು ಕೋರಿರುವ ಹಿನ್ನೆಲೆಯಲ್ಲಿ ಈ ಕೆಳಕಂಡಂತೆ ಆದೇಶಿಸಿದೆ.

### ಸರ್ಕಾರಿ ಆದೇಶ ಸಂಖ್ಯೆ: ಆಇ 01 ಬಿಪಿಇ 2021, ಬೆಂಗಳೂರು, ದಿನಾಂಕ:04-03-2021

ಈ ಕೆಳಕಂಡ ವೆಚ್ಚಗಳಿಗೆ ಸಂಬಂಧಿಸಿದಂತೆ ಈಗಾಗಲೇ ನಿಗಧಿಪಡಿಸಿರುವ ದಿನಾಂಕವನ್ನು ಈ ಕೆಳಗಿನಂತೆ ವಿಸ್ತರಿಸಿ ಆದೇಶಿಸಿದೆ.

| | 31-01-2021ರೊಳಗೆ ಬಿಡುಗಡೆ ಆದೇಶಗಳನ್ನು ಹೊರಡಿಸಿ **upload** ಆಗಿರುವ ವೆಚ್ಚಗಳಿಗೆ ಸಂಬಂಧಿಸಿದಂತೆ ಬಿಲ್ಲು ಸಲ್ಲಿಸುವ ಕಡೆಯ ದಿನಾಂಕ | |
|---|---|---|
| ಬಿಲ್ಲುಗಳ ಸ್ವರೂಪ / ವಿವರಗಳು | **ದಿ:27/01/2021ರ ಆದೇಶದ ಪ್ರಕಾರ ನಿಗಧಿಪಡಿಸಲಾದ ಕೊನೆಯ ದಿನಾಂಕ** | ವಿಸ್ತರಿಸಿರುವ ದಿನಾಂಕ |
| 1)ವೇತನ / ವೇತನ ಬಾಕಿ ಬಿಲ್ಲುಗಳು / ಹಬ್ಬದ ಮುಂಗಡ ಬಿಲ್ಲುಗಳು/ ಅನುದಾನಿತ ವೇತನ ಬಿಲ್ಲುಗಳು / ಇತರೆ ಅನುದಾನಿತ ಬಿಲ್ಲುಗಳು. | 05.03.2021 | **08.03.2021** |
| 2)ಕಛೇರಿ ವೆಚ್ಚಗಳಿಗೆ ಸಂಬಂಧಿಸಿದಂತೆ ಸಾದಿಲ್ವಾರು ಬಿಲ್ಲುಗಳು/ಪ್ರಯಾಣ ಭತ್ಯೆ ಬಿಲ್ಲುಗಳು. | 05.03.2021 | **08.03.2021** |
| 3)ವಿದ್ಯುಚ್ಛಕ್ತಿ, ದೂರವಾಣಿ ಹಾಗೂ ಕಟ್ಟಡ ಬಾಡಿಗೆಗೆ ಸಂಬಂಧಿಸಿದ ಬಿಲ್ಲುಗಳು. | 05.03.2021 | **08.03.2021** |

ಮೇಲ್ಕಂಡ ಬಿಲ್ಲುಗಳನ್ನು ಹೊರತುಪಡಿಸಿ ಉಳಿದ ಬಿಲ್ಲುಗಳನ್ನು ಸಲ್ಲಿಸಲು ಸರ್ಕಾರದ ಆದೇಶ ಸಂಖ್ಯೆ: ಆಇ 01 ಬಿಪಿಇ 2021 ಬೆಂಗಳೂರು, ದಿನಾಂಕ:27.01.2021 ರಲ್ಲಿ ನಿಗಧಿಗೊಳಿಸಲಾಗಿದ್ದ ಕಾಲಮಿತಿಯು ಮುಂದುವರೆಯುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

4/3/2021

(ಹೆಚ್.ಎ. ಶೋಭ)
ಸರ್ಕಾರದ ಉಪ ಕಾರ್ಯದರ್ಶಿ,
ಆರ್ಥಿಕ ಇಲಾಖೆ (ಎಫ್.ಆರ್ ಮತ್ತು ಬಿಸಿಸಿ).

ಇವರಿಗೆ:-

1) ಪ್ರಧಾನ ಮಹಾಲೇಖಪಾಲರು (A&E) / (G&SSA) / (E&RSA), ಕರ್ನಾಟಕ, ಬೆಂಗಳೂರು.
2) ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
3) ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ಕರ್ನಾಟಕ, ಬೆಂಗಳೂರು.
4) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಕರ್ನಾಟಕ, ಬೆಂಗಳೂರು.
5) ಸರ್ಕಾರದ ಎಲ್ಲಾ ಅಪರ / ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು.
6) ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
7) ಲೋಕಾಯುಕ್ತರು, ಕರ್ನಾಟಕ, ಬೆಂಗಳೂರು.
8) ಎಲ್ಲಾ ಪ್ರಾದೇಶಿಕ ಆಯುಕ್ತರುಗಳು.
9) ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ಮಂಡಳಿ, ಕಂದಾಯ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009.
10) ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು / ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
11) ಆಯುಕ್ತರು, ಖಜಾನೆ ಇಲಾಖೆ, ಬೆಂಗಳೂರು.
12) ಎಲ್ಲಾ ಆಂತರಿಕ ಆರ್ಥಿಕ ಸಲಹೆಗಾರರು.
13) ಎಲ್ಲಾ ಇಲಾಖಾ ಮುಖ್ಯಸ್ಥರು.
14) ಕಛೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.